ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.105/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಕೇಶ್ಯಾನಾಯ್ಕ | CW: 7 | PW: 7 |
| ತಂದೆಯ ಹೆಸರು | : | ಗಂಗಾನಾಯ್ಕ | | |
| ವಯಸ್ಸು | : | 42 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಹೊಸಜೋಗ | | |

ದಿನಾಂಕಃ 10.03.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ 3 ಮತ್ತು 6 ರವರು ಗೊತ್ತು. ಗಲಾಟೆಯ ಸಂಬಂಧ ಪೋಲೀಸರು ಚಾಸಾ 3 ರವರ ಮನೆಯ ಹತ್ತಿರ ಮಹಜರ್ ಗೆ ಬಂದಿದ್ದು, ಸ್ಥಳ ಪರಿಶೀಲನೆ ಮಾಡಿ ಮಹಜರ್ ಮಾಡಿ ಪೊಟೋಗಳನ್ನು ತೆಗೆದು ನನ್ನಿಂದ ಸಹಿಗಳನ್ನು ಪಡೆದುಕೊಂಡಿರುತ್ತಾರೆ.

ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 3 ಮತ್ತು 4 ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ.

(ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–

ಮಹಜರ್ ಮಾಡಿದ ಸಮಯ ಬೆಳಗ್ಗೆ 10 ರಿಂದ 11 ಗಂಟೆ ಎಂದರೆ ಸರಿ. ಪಂಚನಾಮೆಗೆ ಸ್ಥಳವನ್ನು ಚಾಸಾ 3 ರವರು ಪೋಲೀಸರಿಗೆ ತೋರಿಸಿರುತ್ತಾರೆ ಎಂದರೆ ಸರಿ. ಪಂಚನಾಮೆ ಸಂದರ್ಭ ನನ್ನ ಜೊತೆ ಚಾಸಾ 7 ರವರು ಸಹ ಇದ್ದರು ಎಂದರೆ ಸರಿ. ಮು.ಮಾ 1 ಮತ್ತು 2 ನ್ನು ಪೋಲೀಸರು ಮಹಜರ್ ಸಂದರ್ಭ ವಶಪಡಿಸಿಕೊಂಡು ಪೊಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ 1 ಮತ್ತು 2 ನ್ನು ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲುಃ– ಆರೋಪಿ ಪರ ಶ್ರೀ.ಎಂ ಆರ್ ಎಂ ವಕೀಲರಿಂದಃ–

ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಪೋಲೀಸರು ನನಗೆ ಓದಿ ಹೇಳಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಯನ್ನು ಯಾರು ಬರೆದರು ಎಂದರೆ ಗೊತ್ತಿಲ್ಲ. ಪಂಚನಾಮೆಗೆ ಬರುವಂತೆ ಪೊಲೀಸರು ನೋಟೀಸ್ ನೀಡಿದ್ದರಾ ಎಂದರೆ ಇಲ್ಲ. ಪಂಚನಾಮೆಯ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇಲ್ಲ. ಪೊಲೀಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ನನ್ನ ಸಮಕ್ಷಮ ಪೊಲೀಸರು ಮು ಮಾ 1 ಮತ್ತು 2 ನ್ನು ವಶಪಡಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ 3 ರವರ ಮಾತು ಕೇಳಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.